ಸಡಿಲಗೊಳಿಸಿದ ನಂತರ ಹುದ್ದೆ ಭರ್ತಿಗೆ ಅನುಮತಿ ನೀಡುವ ಬಗ್ಗೆ ಕ್ರಮವಹಿಸಲಾಗುವುದು.

ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ

1488(2548), ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ಸೊರಬ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಲವಾರು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದ ವ್ಯವಸ್ಥೆಯಿದ್ದು, ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೇ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸರ್ಕಾರ ಅನುದಾನ ಬಿಡುಗಡೆ ಮಾಡುವುದೇ;

ಇ) ಹಾಗಿದ್ದಲ್ಲಿ, ಅನುದಾನ ಯಾವಾಗ ಬಿಡುಗಡೆ ಮಾಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ.

ಆ) ಹಲವಾರು ಶಾಲೆಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವುದರಿಂದ ಬಾವಿ/ಬೋರವೆಲ್ ಮೂಲಕ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಬೇಕಾಗಿದೆ. ಈ ಸಂಬಂಧ ಸ್ಥಳೀಯ ಸರ್ಕಾರ ಹಾಗೂ ಜಿಲ್ಲಾ ಪಂಚಾಯತ್ ಶಿವಮೊಗ್ಗ ಇವರಿಂದ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಆದಾಗ್ಯೂ ಸಹ ಬೇರೆ ಬೇರೆ ವ್ಯವಸ್ಥೆಯಿಂದ ನೀರು ಸಂಗ್ರಹ ಮಾಡಿಕೊಂಡು ಅಕ್ಷರ ದಾಸೋಹ ಕಾರ್ಯಕ್ರಮ ಸಮರ್ಪಕವಾಗಿ ನಡೆಸಲಾಗುತ್ತಿದೆ.

ಇ) ಒಟ್ಟಾರೆ ಬೇಡಿಕೆಯನ್ನು ಗಮನಿಸಿ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸಲು ₹ 147.00ಕೋಟಿಗಳ ಅನುದಾನವನ್ನು ಹೆಚ್ಚುವರಿಯಾಗಿ ಬಿಡುಗಡೆ ಮಾಡಲು ಸವಿವರ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದ್ದು, ಅನುದಾನ ಒದಗಿಸಿದ ತಕ್ಷಣ ಆದ್ಯತೆಯ ಮೇರೆಗೆ ಒದಗಿಸಲಾಗುವುದು.

ಮನೆಗಳ ನೋಂದಣಿ

1489(2559), ಶ್ರೀ ಮಹೇಶ್ ಎಸ್.ಆರ್.(ಕೃಷ್ಣರಾಜನಗರ)

ಅ) ಪಂಚಾಯತ್ ರಾಜ್ ಇಲಾಖೆಯಿಂದ ಬಡ ಜನರ ಅನುಕೂಲಕ್ಕೆಂದು ಮಂಜೂರು ಮಾಡಲಾಗಿರುವ ಮನೆಗಳ ನೋಂದಣಿ ಕಾರ್ಯದಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಮನೆಗಳು ನೋಂದಣಿಯಾಗದೇ ಇರಲು ಕಾರಣವೇನು?

ಇ) ನೋಂದಣಿ ಕಾರ್ಯದಲ್ಲಿ ಆಗುತ್ತಿರುವ ತೊಂದರೆ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಕೆ.ಪಾಟೀಲ್(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಬಂದಿದೆ.

ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂ.12278/2007 ರಲ್ಲಿ ಅನಧಿಕೃತ ಆಸ್ತಿಗಳ ನೊಂದಣಿಯನ್ನು ತಡೆಯಲು ವ್ಯಾಪಕವಾದ ಸಮಗ್ರ ನೀತಿಯನ್ನು ಜಾರಿಗೆ ತರುವುದಕ್ಕೆ ಕಂದಾಯ,